# ರೂರಲ್ ಪದವಿ ಕಾಲೇಜು, ಕನಕಪುರ -562117

## ಪ್ರಥಮ ಪದವಿ ತರಗತಿಗಳ ಪ್ರಶಿಕ್ಷಣ ಕಾರ್ಯಕ್ರಮದ ವರದಿ

## ಅಕ್ಟೋಬರ್ – 2020

ಆಡಳಿತ ಮಂಡಳಿಯ ಅನುಮತಿ ಪಡೆದು ಪ್ರಥಮ ಪದವಿಗೆ ಸೇರ್ಪಡೆಯಾಗಿರುವ ನೂತನ ವಿದ್ಯಾರ್ಥಿಗಳಿಗೆ ಪ್ರಶಿಕ್ಷಣ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಕಾಲೇಜು ಅಭಿವೃದ್ಧಿ ಮಂಡಳಿಯ ನಿರ್ದೇಶನದಂತೆ ದಿನಾಂಕ : 08-10-2020, 09-10-2020 ಮತ್ತು 10-10-2020 ಈ ಮೂರು ದಿನಗಳ ಕಾಲ ವಿಭಾಗವಾರು ಮುಖ್ಯಸ್ಥರು ಮತ್ತು ಉಪನ್ಯಾಸಕರ ಸಹಕಾರದಿಂದ ಯಶಸ್ವಿಯಾಗಿ ನೇರವೇರಿಸಲಾಯಿತು. ದಿನಾಂಕ : 08-10-2020 ರಂದು ವಿಜ್ಞಾನ ವಿಭಾಗದ ಪ್ರಥಮ ಬಿಎಸ್ಸಿ ಯ ಎಲ್ಲಾ ವಿಭಾಗಗಳಿಗೆ ಬೆಳಗ್ಗೆ 10-00 ರಿಂದ ಮಧ್ಯಾಹ್ನ 1-00 ಗಂಟೆಯವರೆಗೆ ಪ್ರಾಂಶುಪಾಲರ ಅಧ್ಯಕ್ಷತೆಯಲ್ಲಿ ವಿಜ್ಞಾನ ವಿಭಾಗದ ಎಲ್ಲಾ ಉಪನ್ಯಾಸಕರ ಸಹಕಾರದಿಂದ ಪ್ರಶಿಕ್ಷಣ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಲಾಯಿತು. ಈ ಕಾರ್ಯಕ್ರಮದಲ್ಲಿ ಕೋರ್ಸ್‌ಗಳ ಪರಿಚಯ ಕಾಲೇಜಿನ ಶೈಕ್ಷಣಿಕ ಮತ್ತು ಶೈಕ್ಷಣಿಕೇತರ ಚಟುವಟಿಕೆಗಳ ಬಗ್ಗೆ ಮನವರಿಕೆ ಮಾಡಿಕೊಡಲಾಯಿತು. ಈ ಕಾರ್ಯಕ್ರಮಕ್ಕೆ ಕಾಲೇಜಿಗೆ ಪ್ರವೇಶ ಪಡೆದ ಬಿಎಸ್ಸಿ ವಿದ್ಯಾರ್ಥಿಗಳು ಮತ್ತು ಅವರ ಪೋಷಕರು ಬಹು ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಗೌರವ ಕಾರ್ಯದರ್ಶಿಗಳಾದ ಶ್ರೀ ಸಿ. ರಮೇಶ್‌ರವರು ಕಾರ್ಯಕ್ರಮದಲ್ಲಿ ಭಾಗವಹಿಸಿ ಘನ ಸಂಸ್ಥೆಯ ಆಶಯಗಳನ್ನು ಪರಿಚಯ ಮಾಡಿಕೊಟ್ಟರು.

ದಿನಾಂಕ : 09-10-2020 ರಂದು ಕಲಾ ವಿಭಾಗದಲ್ಲಿ ಪ್ರವೇಶ ಪಡೆದ ವಿವಿಧ ಕೋರ್ಸ್‌ಗಳ ಎಲ್ಲಾ ವಿದ್ಯಾರ್ಥಿಗಳು ಮತ್ತು ಪೋಷಕ ವರ್ಗಕ್ಕೆ ಪ್ರಶಿಕ್ಷಣ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿಯೂ ಪ್ರಾಂಶುಪಾಲರು ಅಧ್ಯಕ್ಷತೆ ವಹಿಸಿಕೊಂಡಿದ್ದು, ಗೌರವ ಕಾರ್ಯದರ್ಶಿಗಳು ವಿಶೇಷ ಅಹ್ವಾನಿತರಾಗಿ ಆಗಮಿಸಿ ಸಂಸ್ಥೆಯ ಹಾಗೂ ಕಾಲೇಜಿನ ಹಿನ್ನಲೆಯನ್ನು ಪರಿಚಯಿಸಿದರು. ಇಲ್ಲಿಯೂ ಸಹ ವಿದ್ಯಾರ್ಥಿಗಳು ಮತ್ತು ಪೋಷಕ ವರ್ಗಕ್ಕೆ ಕಾಲೇಜಿನ ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳ ಸಮಸ್ತ ಪರಿಚಯ ಮಾಡಿ ಕೊಡಲಾಯಿತು. ಕಲಾ ವಿಭಾಗದ ಎಲ್ಲಾ ಮುಖ್ಯಸ್ಥರು ಮತ್ತು ಉಪನ್ಯಾಸಕರು ಕಾರ್ಯಕ್ರಮವನ್ನು ಯಶಸ್ವಿಯಾಗಿ ನೆರವೇರಿಸಿಕೊಟ್ಟರು.

ದಿನಾಂಕ : 10-10-2020 ಮತ್ತು 12-10-2020 ರಂದು ವಾಣಿಜ್ಯ ವಿಭಾಗದಲ್ಲಿ ಪ್ರವೇಶ ಪಡೆದ ವಿವಿಧ ಕೋರ್ಸ್‌ಗಳ ಎಲ್ಲಾ ವಿದ್ಯಾರ್ಥಿಗಳು ಮತ್ತು ಪೋಷಕ ವರ್ಗಕ್ಕೆ

ಪ್ರಶಿಕ್ಷಣ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ದಿನಾಂಕ : 10-10-2020 ರ ಕಾರ್ಯಕ್ರಮದಲ್ಲಿ ಪ್ರಾಂಶುಪಾಲರು ಅಧ್ಯಕ್ಷತೆ ವಹಿಸಿಕೊಂಡಿದ್ದು, ಘನ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಕೆ. ಜಿ. ನಾಗರಾಜುರವರು, ಗೌರವ ಕಾರ್ಯದರ್ಶಿಗಳಾದ ಶ್ರೀ ಸಿ. ರಮೇಶ್‌ರವರು ಭಾಗವಹಿಸಿ, ಕಾಲೇಜು ಅಭಿವೃದ್ಧಿ ಸಮಿತಿಯ ಸಕ್ರಿಯ ಸದಸ್ಯರು ಹಾಗೂ ಮಾಜಿ ಅಧ್ಯಕ್ಷರಾದ ಶ್ರೀ ಕೆ. ಜಿ. ತಿಮ್ಮಪ್ಪನವರು ವಾಣಿಜ್ಯ ವಿಭಾಗದ ಶೈಕ್ಷಣಿಕ ಸೌಲಭ್ಯಗಳು ಮತ್ತು ವಾಣಿಜ್ಯ ವಿಭಾಗದ ಅಧ್ಯಯನದಿಂದ ದೊರೆಯಬಹುದಾದ ವಿಫುಲವಾದ ಉದ್ಯೋಗವಕಾಶಗಳ ಬಗ್ಗೆ ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ಉತ್ತೇಜನ ನೀಡಿದರು. ದಿನಾಂಕ : 12-10-2020 ರಂದು ಸಹ ಪ್ರಾಂಶುಪಾಲರವರ ಅಧ್ಯಕ್ಷತೆಯಲ್ಲಿ ಕಾಲೇಜಿನ ಪಠ್ಯ ಮತ್ತು ಪಠ್ಯೇತರ ಹಾಗೂ ವಾಣಿಜ್ಯ ವಿಭಾಗದ ಅವಕಾಶಗಳ ಬಗ್ಗೆ ದಾಖಲಾತಿ ಪಡೆದ ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ಪರಿಚಯ ಮಾಡಿಕೊಡಲಾಯಿತು. ವಾಣಿಜ್ಯ ವಿಭಾಗದ ಮುಖ್ಯಸ್ಥರು ಮತ್ತು ಅಧ್ಯಾಪಕ ವರ್ಗ ಪ್ರಶಿಕ್ಷಣ ಕಾರ್ಯಕ್ರಮ ಯಶಸ್ವಿಯಾಗಲು ಕಾರಣರಾದರು. ಒಟ್ಟಾರೆ ಕೋವಿಡ್-19 ಸಂದರ್ಭದಲ್ಲಿಯೂ ಪ್ರಶಿಕ್ಷಣ ಕಾರ್ಯಕ್ರಮಕ್ಕೆ ಉತ್ಸಾಹದಿಂದ ಭಾಗವಹಿಸಿದ ಪ್ರಥಮ ಪದವಿಯ ಎಲ್ಲಾ ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ಪ್ರಾಂಶುಪಾಲರು ಅಭಿನಂದನೆಗಳನ್ನು ಸಲ್ಲಿಸಿದರು. ಪ್ರಶಿಕ್ಷಣ ಕಾರ್ಯಕ್ರಮಕ್ಕೆ ಭಾಗವಹಿಸಿದ್ದ ಪೋಷಕರು ಮತ್ತು ವಿದ್ಯಾಥಿಗಳಿಂದ ಕಾರ್ಯಕ್ರಮದ ಮೇಲಿನ ಅಭಿಪ್ರಾಯವನ್ನು ಸಂಗ್ರಹಿಸಲಾಯಿತು.

8/12/2020

ಪ್ರಾಂಶುಪಾಲರು

PRINCIPAL
RURAL COLLEGE
KANAKAPURA - 562 117